**All India Radio: Bangalore**
**National Bulletin In Kannada**
**14.05.2026 07.35 a.m.**

**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**14.05.2026 07.35 a.m.**

**<><><><>**

ಮುಖ್ಯಾಂಶಗಳು

1. ನಾಳೆಯಿಂದ ಪ್ರಧಾನಿ ನರೇಂದ್ರ ಮೋದಿ ಆರು ದಿನಗಳ ವಿದೇಶ ಪ್ರವಾಸ
2. ನವದೆಹಲಿಯಲ್ಲಿ ಇಂದಿನಿಂದ ಎರಡು ದಿನಗಳ ಕಾಲ ಬ್ರಿಕ್ಸ್ ವಿದೇಶಾಂಗ ಸಚಿವರ ಶೃಂಗಸಭೆ
3. ಚೀನಾದ ಬೀಜಿಂಗ್‌ನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ; ಜಾಗತಿಕ ಸಂಘರ್ಷ ಕುರಿತು ಮಹತ್ವದ ಸಮಾಲೋಚನೆ ನಿರೀಕ್ಷೆ
4. ಐಪಿಎಲ್ ಟಿ-೨೦ ಕ್ರಿಕೆಟ್ ; ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೬ ವಿಕೆಟ್‌ಗಳ ಜಯ

<><><><>

ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ಆರು ದಿನಗಳ ಕಾಲ ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ, ನೆದರ್ಲ್ಯಾಂಡ್ಸ್, ಸ್ವೀಡನ್, ನಾರ್ವೆ ಮತ್ತು ಇಟಲಿಗೆ ಭೇಟಿ ನೀಡಲಿದ್ದಾರೆ. ಈ ಕುರಿತು ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಸಿ.ಬಿ.ಜಾರ್ಜ್, ತಮ್ಮ ಐದು ರಾಷ್ಟ್ರಗಳ ಭೇಟಿಯ ಮೊದಲ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಯುಎಇ ತಲುಪಲಿದ್ದಾರೆ. ಅಲ್ಲಿ ಅವರು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಲಿದ್ದಾರೆ ಎಂದರು. ಉಭಯ ನಾಯಕರು ದ್ವಿಪಕ್ಷೀಯ ಸಹಕಾರದ ಬಗ್ಗೆ, ವಿಶೇಷವಾಗಿ ಇಂಧನ ಸಹಕಾರದ ಬಗ್ಗೆ ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ಅವರು ತಿಳಿಸಿದರು.

<><><><>

ಬ್ರಿಕ್ಸ್ ವಿದೇಶಾಂಗ ಸಚಿವರ ಎರಡು ದಿನಗಳ ಸಭೆ ನವದೆಹಲಿಯಲ್ಲಿಂದು ಆರಂಭವಾಗಲಿದೆ. ಈ ಸಭೆಯ ಅಧ್ಯಕ್ಷತೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ವಹಿಸಲಿದ್ದಾರೆ.

ಸದಸ್ಯ ಮತ್ತು ಪಾಲುದಾರ ರಾಷ್ಟ್ರಗಳ ವಿದೇಶಾಂಗ ಸಚಿವರು ಮತ್ತು ನಿಯೋಗದ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಬ್ರಿಕ್ಸ್ ಮುಖ್ಯಸ್ಥರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ಸಭೆಯ ಸಮಯದಲ್ಲಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ಪರಸ್ಪರ ಆಸಕ್ತಿಯ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಎರಡನೇ ದಿನ, ಬ್ರಿಕ್ಸ್ ಸದಸ್ಯ ಮತ್ತು ಪಾಲುದಾರ ರಾಷ್ಟ್ರಗಳು ಬ್ರಿಕ್ಸ್‌ನ ಸ್ಥಿತಿಗತಿ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ ಕುರಿತು ಅಧಿವೇಶನದಲ್ಲಿ ಚರ್ಚಿಸಲಿದ್ದಾರೆ. ನಂತರ "ಜಾಗತಿಕ ಆಡಳಿತ ಮತ್ತು ಬಹುಪಕ್ಷೀಯ ವ್ಯವಸ್ಥೆಯ ಸುಧಾರಣೆಗಳು" ಕುರಿತು ಚರ್ಚೆ ನಡೆಸುವ ನಿರೀಕ್ಷೆಯಿದೆ.

<><><><>

ದಕ್ಷಿಣ ಆಫ್ರಿಕಾದ ಅಂತಾರಾರಾಷ್ಟ್ರೀಯ ಸಂಬಂಧಗಳು ಮತ್ತು ಸಹಕಾರ ಸಚಿವ ರೊನಾಲ್ಡ್ ಲಮೋಲಾ ಅವರೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ನವದೆಹಲಿಯಲ್ಲಿ ನಿನ್ನೆ ಮಾತುಕತೆ ನಡೆಸಿದರು.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ದ್ವಿಪಕ್ಷೀಯ ಸಹಕಾರವನ್ನು ತೀವ್ರಗೊಳಿಸಲು ಸಮ್ಮತಿಸಲಾಗಿದೆ. ಭಾರತ-ದಕ್ಷಿಣ ಆಫ್ರಿಕಾ ಕಾರ್ಯತಂತ್ರದ ಪಾಲುದಾರಿಕೆಯ ವಿವಿಧ ಅಂಶಗಳನ್ನು ಪರಿಶೀಲಿಸಿ, ಪರಸ್ಪರ ಆಸಕ್ತಿಯ ಪ್ರಮುಖ ಬಹುಪಕ್ಷೀಯ ವಿಷಯಗಳ ಬಗ್ಗೆ ಸಮಾಲೋಚಿಸಲಾಗಿದೆ ಎಂದು ಅವರು ಹೇಳಿದ್ದಾರೆ. ರೊನಾಲ್ಡ್ ಲಮೋಲಾ ಅವರು, ದಕ್ಷಿಣ ಆಫ್ರಿಕಾದ ನಿಯೋಗವನ್ನು ಆಯೋಜಿಸಿದ್ದಕ್ಕಾಗಿ ಭಾರತಕ್ಕೆ ಧನ್ಯವಾದ ಸಲ್ಲಿಸಿದರು. ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯ ಮೂಲಕ ಜಾಗತಿಕ ಸಂವಾದವನ್ನು ಉತ್ತೇಜಿಸಲು ಭಾರತದ ಪ್ರಯತ್ನಗಳನ್ನು ಶ್ಲಾಘಿಸಿದರು. ರಾಜತಾಂತ್ರಿಕ ಸಂಬಂಧಗಳನ್ನು ಸ್ಥಾಪಿಸಿದಾಗಿನಿಂದ ಮೂರು ದಶಕಗಳಿಗೂ ಹೆಚ್ಚು ಕಾಲ ಭಾರತ ಮತ್ತು ದಕ್ಷಿಣ ಆಫ್ರಿಕಾ ನಿಕಟ ಮತ್ತು ಅರ್ಥಪೂರ್ಣ ಸಂಬಂಧಗಳನ್ನು ಹೊಂದಿವೆ ಎಂದು ಅವರು ಹೇಳಿದ್ದಾರೆ.

<><><><>

ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಎರಡು ದಿನಗಳ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿನ್ನೆ ಸಂಜೆ ಬೀಜಿಂಗ್‌ಗೆ ಆಗಮಿಸಿದರು. ಇರಾನ್ ಯುದ್ಧ, ಜಾಗತಿಕ ಇಂಧನ ಬಿಕ್ಕಟ್ಟು, ವ್ಯಾಪಾರ ಉದ್ವಿಗ್ನತೆಗಳು, ತೈವಾನ್ ಮತ್ತು ಕೃತಕ ಬುದ್ಧಿಮತ್ತೆ

ಕಾರ್ಯಸೂಚಿಯಲ್ಲಿ ಪ್ರಾಬಲ್ಯ ಸಾಧಿಸುವ ಸಾಧ್ಯತೆಯ ಹಿನ್ನೆಲೆಯಲ್ಲಿ ಜಾಗತಿಕ ಭೌಗೋಳಿಕ ರಾಜಕೀಯಕ್ಕೆ ಈ ಶೃಂಗಸಭೆಯು ಒಂದು ನಿರ್ಣಾಯಕ ಕ್ಷಣವಾಗಿದೆ. ಪ್ರಮುಖ ಪ್ರಗತಿಗಳ ನಿರೀಕ್ಷೆಗಳು ಸೀಮಿತವಾಗಿದ್ದರೂ, ಹೆಚ್ಚುತ್ತಿರುವ ಅಂತರರಾಷ್ಟ್ರೀಯ ಅನಿಶ್ಚಿತತೆಯ ನಡುವೆ ವಿಶ್ವದ ಎರಡು ಪ್ರಮುಖ ದೇಶಗಳ ನಡುವಿನ ಸಂಬಂಧಗಳನ್ನು ಸ್ಥಿರಗೊಳಿಸುವ ನಿರ್ಣಾಯಕ ಪ್ರಯತ್ನವಾಗಿ ಈ ಸಭೆಯನ್ನು ಜಾಗತಿಕ ಸಮುದಾಯ ನೋಡುತ್ತಿದೆ. ಹೋರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಮತ್ತು ಕೊಲ್ಲಿಯಲ್ಲಿ ಉದ್ವಿಗ್ನತೆಯನ್ನು ಕಡಿಮೆ ಮಾಡುವ ಗುರಿ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಮಾತುಕತೆಗಳನ್ನು ಉತ್ತೇಜಿಸಲು ಟೆಹ್ರಾನ್‌ನೊಂದಿಗೆ ಚೀನಾದ ಪ್ರಭಾವವನ್ನು ಬಳಸಲು ಟ್ರಂಪ್ ಕ್ಸಿ ಜಿನ್‌ಪಿಂಗ್ ಅವರನ್ನು ಒತ್ತಾಯಿಸುವ ಸಾಧ್ಯತೆಯಿದೆ. ಎರಡೂ ಕಡೆಯವರು ಅಸ್ತಿತ್ವದಲ್ಲಿರುವ ವ್ಯಾಪಾರ ಒಪ್ಪಂದದ ಸಂಭಾವ್ಯ ವಿಸ್ತರಣೆಯ ಬಗ್ಗೆ ಚರ್ಚಿಸುತ್ತಿದ್ದಾರೆ. ಬೋಯಿಂಗ್ ವಿಮಾನ, ಕೃಷಿ ರಫ್ತು ಮತ್ತು ಇಂಧನ ಉತ್ಪನ್ನಗಳು ಸೇರಿದಂತೆ ಅಮೆರಿಕದ ಸರಕುಗಳನ್ನು ಚೀನಾ ಖರೀದಿಸಬೇಕೆಂದು ಪ್ರೇರೇಪಿಸುವ ಸಾಧ್ಯತೆಯಿದೆ. ಅಮೆರಿಕ ಅಧ್ಯಕ್ಷರು ತಮ್ಮ ಚೀನಾ ಭೇಟಿಯಲ್ಲಿ ಹಲವಾರು ಉನ್ನತ ವ್ಯಾಪಾರ ಮತ್ತು ತಂತ್ರಜ್ಞಾನ ದಿಗ್ಗಜರನ್ನು ತಮ್ಮೊಂದಿಗೆ ಕರೆತಂದಿದ್ದಾರೆ. ದ್ವಿಪಕ್ಷೀಯ ಸಂಬಂಧಗಳಲ್ಲಿ ಆರ್ಥಿಕ ಮತ್ತು ತಾಂತ್ರಿಕ ಸಮಸ್ಯೆಗಳ ಪ್ರಾಮುಖ್ಯತೆಯ ಬಗ್ಗೆ ಸಮಾಲೋಚನೆ ನಡೆಸಲು ಉದ್ದೇಶಿಸಿದ್ದಾರೆ. ಟ್ರಂಪ್ ಜೊತೆ ಎನ್ವಿಡಿಯಾ ಸಿಇಒ ಜೆನ್ಸನ್ ಹುವಾಂಗ್, ಆಪಲ್ ಸಿಇಒ ಟಿಮ್ ಕುಕ್, ಟೆಸ್ಲಾ ಮತ್ತು ಸ್ಪೇಸ್‌ಎಕ್ಸ್ ಮುಖ್ಯಸ್ಥ ಎಲಾನ್ ಮಸ್ಕ್ ಹಾಗೂ ಬ್ಲ್ಯಾಕ್‌ರಾಕ್ ಸಿಇಒ ಲ್ಯಾರಿ ಫಿಂಕ್ ಸೇರಿದ್ದಾರೆ. ಮೆಟಾ, ವೀಸಾ, ಜೆಪಿ ಮೋರ್ಗಾನ್, ಬೋಯಿಂಗ್ ನ ಹಿರಿಯ ಪ್ರತಿನಿಧಿಗಳು ಸಹ ನಿಯೋಗದ ಭಾಗವಾಗಿದ್ದಾರೆ.

<><><><>

ಇರಾನ್ ಜೊತೆಗಿನ ಯುದ್ಧದ ಸಮಯದಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸಂಯುಕ್ತ ಅರಬ್ ಒಕ್ಕೂಟಕ್ಕೆ ರಹಸ್ಯವಾಗಿ ತೆರಳಿ ಅಲ್ಲಿನ ಅಧ್ಯಕ್ಷರನ್ನು ಭೇಟಿಯಾಗಿರುವುದಾಗಿ ವರದಿಯಾಗಿದೆ. ನೆತನ್ಯಾಹು ಅವರ ಕಚೇರಿಯ ಹೇಳಿಕೆಯ ಪ್ರಕಾರ, ಇಸ್ರೇಲ್ ಪ್ರಧಾನಿ ಅವರು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ಮಹತ್ವದ ಸಮಾಲೋಚನೆ ನಡೆಸಿದರು. ಈ ಸಭೆಯು ಇಸ್ರೇಲ್ ಮತ್ತು ಯುಎಇ ನಡುವಿನ ಸಂಬಂಧದಲ್ಲಿ

ಐತಿಹಾಸಿಕ ಪ್ರಗತಿಗೆ ಕಾರಣವಾಗಿದೆ. ಆದರೂ ಸಭೆಯಲ್ಲಿ ನಡೆದ ಚರ್ಚೆಗಳ ವಿವರಗಳು ಬಹಿರಂಗಗೊಂಡಿಲ್ಲ. ಇಸ್ರೇಲ್ ಪ್ರಧಾನಿಯ ಭೇಟಿಯ ವರದಿಗಳನ್ನು ಯುಎಇ ನಿರಾಕರಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಯುಎಇ ವಿದೇಶಾಂಗ ಸಚಿವಾಲಯವು ಈ ವರದಿಗಳು ವಾಸ್ತವದಿಂದ ಕೂಡಿಲ್ಲ. ಇಸ್ರೇಲ್‌ನೊಂದಿಗಿನ ತನ್ನ ಸಂಬಂಧವು ಮುಕ್ತವಾಗಿದೆ ಮತ್ತು ಅಧಿಕೃತವಾಗಿ ಘೋಷಿಸಲಾದ ಅಬ್ರಹಾಂ ಒಪ್ಪಂದಗಳನ್ನು ಮಾತ್ರ ಆಧರಿಸಿದೆ ಎಂದು ಒತ್ತಿ ಹೇಳಿದೆ. ಯಾವುದೇ ರಹಸ್ಯ ಸಭೆಗಳು ಅಥವಾ ಅನಧಿಕೃತ ವ್ಯವಸ್ಥೆಗಳಿಲ್ಲ ಎಂದು ಅದು ಸ್ಪಷ್ಟಪಡಿಸಿದೆ. ಈ ವರದಿಗಳಿಗೆ ಇರಾನ್ ತೀವ್ರವಾಗಿ ಪ್ರತಿಕ್ರಿಯಿಸಿದೆ. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಕೊಲ್ಲಿ ರಾಷ್ಟ್ರಗಳು ಇಸ್ರೇಲ್‌ನೊಂದಿಗೆ ಸಹಕರಿಸುವುದರ ವಿರುದ್ಧ ಎಚ್ಚರಿಕೆ ನೀಡಿದರು. ಇರಾನ್ ವಿರುದ್ಧ ಇಸ್ರೇಲ್‌ಗೆ ಸಹಾಯ ಮಾಡುವ ಯಾವುದೇ ದೇಶವನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ವೈದ್ಯಕೀಯ ಕೋರ್ಸ್‌ಗಳಿಗೆ ನೀಟ್ ಆಧಾರಿತ ಪ್ರವೇಶವನ್ನು ಸ್ಥಗಿತಗೊಳಿಸಬೇಕು. ಬದಲಿಗೆ ೧೨ನೇ ತರಗತಿಯ ಅಂಕಗಳ ಆಧಾರದ ಮೇಲೆ ಪ್ರವೇಶಾವಕಾಶ ಕಲ್ಪಿಸಲು ಅವಕಾಶ ನೀಡಬೇಕು ಎಂದು ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ರಾಷ್ಟ್ರೀಯ ಮಟ್ಟದ ಪರೀಕ್ಷೆಯಲ್ಲಿ ರಚನಾತ್ಮಕ ದೋಷಗಳಿವೆ. ಗ್ರಾಮೀಣ ಪ್ರದೇಶಗಳು, ಸರ್ಕಾರಿ ಶಾಲೆಗಳು, ತಮಿಳು ಮಾಧ್ಯಮ ಹಿನ್ನೆಲೆ ಮತ್ತು ಸಾಮಾಜಿಕವಾಗಿ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳಿಗೆ ಅನಾನುಕೂಲವಾಗಲಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ನೀಟ್ ಅನ್ನು ರದ್ದುಗೊಳಿಸುವ ಮತ್ತು ೧೨ನೇ ತರಗತಿಯ ಅಂಕಗಳ ಆಧಾರದ ಮೇಲೆ ಎಂಬಿಬಿಎಸ್, ಬಿಡಿಎಸ್ ಮತ್ತು ಆಯುಷ್ ಕೋರ್ಸ್‌ಗಳಲ್ಲಿ ರಾಜ್ಯ ಕೋಟಾದಡಿಯಲ್ಲಿ ಎಲ್ಲಾ ಸೀಟುಗಳನ್ನು ಭರ್ತಿ ಮಾಡಲು ರಾಜ್ಯಗಳಿಗೆ ಅನುಮತಿ ನೀಡುವ ರಾಜ್ಯದ ಬಹುಕಾಲದ ಬೇಡಿಕೆಯನ್ನು ಮುಖ್ಯಮಂತ್ರಿ ಪುನರುಚ್ಚರಿಸಿದ್ದಾರೆ.

<><><>

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದನ್ನು ವಿರೋಧಿಸಿ ಯುವ ಕಾಂಗ್ರೆಸ್ ಕಾರ್ಯಕರ್ತರು ದಕ್ಷಿಣ ಮುಂಬೈನಲ್ಲಿ ನಿನ್ನೆ ಪ್ರತಿಭಟನೆ ನಡೆಸಿದರು. ಈ ವಿಷಯದ ಬಗ್ಗೆ ಜಂಟಿ ಸಂಸದೀಯ ಸಮಿತಿಯಿಂದ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು. ಮುಂಬೈ ಯುವ ಕಾಂಗ್ರೆಸ್ ಅಧ್ಯಕ್ಷೆ

ಜೀನತ್ ಶಬ್ರೀನ್ ನೇತೃತ್ವದಲ್ಲಿ ಫೋರ್ಟ್ ಪ್ರದೇಶದಲ್ಲಿರುವ ರಾಜ್ಯ ಸಿಇಟಿ ಕಚೇರಿಯ ಹೊರಗೆ ಪ್ರತಿಭಟನಾಕಾರರು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ಆರೋಪ ಮಾಡಿದರು. ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ಸುಮಾರು ೨೪ ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಅಪಾಯಕ್ಕೆ ಸಿಲುಕಿಸಿದೆ ಮತ್ತು ಅವರ ಪೋಷಕರ ಆಕಾಂಕ್ಷೆಗಳನ್ನು ಛಿದ್ರಗೊಳಿಸಿದೆ ಎಂದು ಶಬ್ರೀನ್ ಆರೋಪಿಸಿದರು.

<><><>

ಕೇಂದ್ರ ತನಿಖಾ ದಳ - ಸಿಬಿಐ ನಿರ್ದೇಶಕ ಪ್ರವೀಣ್ ಸೂದ್ ಅವರ ಸೇವಾವಧಿಯನ್ನು ಕೇಂದ್ರ ಸರ್ಕಾರ ಒಂದು ವರ್ಷ ವಿಸ್ತರಣೆ ಮಾಡಿದೆ. ಸಿಬ್ಬಂದಿ ಮತ್ತು ತರಬೇತಿ ಇಲಾಖೆ ಈ ಸಂಬಂಧ ಆದೇಶ ಹೊರಡಿಸಿದೆ. ಸಚಿವ ಸಂಪುಟದ ನೇಮಕಾತಿ ಸಮಿತಿಯು ಇದೇ ೨೪ರ ನಂತರವೂ ಸೂದ್ ಅವರನ್ನು ತನಿಖಾ ಸಂಸ್ಥೆಯ ನಿರ್ದೇಶಕರಾಗಿ ಮುಂದುವರೆಸಲು ಸಮ್ಮತಿಸಿದೆ.

<><><>

ರಾಯ್‌ಪುರದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಆರು ವಿಕೆಟ್‌ಗಳ ಗೆಲುವು ದಾಖಲಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ಅಂಗ್‌ಕ್ರಿಶ್ ರಘುವಂಶಿ ಅವರ ೭೧ ಮತ್ತು ರಿಂಕು ಸಿಂಗ್ ಅವರ ಅಜೇಯ ೪೯ ರನ್‌ಗಳ ನೆರವಿನಿಂದ ನಿಗದಿತ ೨೦ ಓವರ್‌ಗಳಲ್ಲಿ ನಾಲ್ಕು ವಿಕೆಟ್‌ಗಳಿಗೆ ೧೯೨ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ವಿರಾಟ್ ಕೊಹ್ಲಿ ಅವರ ೬೦ ಎಸೆತಗಳಲ್ಲಿ ಅಜೇಯ ೧೦೫ ರನ್‌ಗಳ ನೆರವಿನಿಂದ ೧೯.೧ ಓವರ್‌ಗಳಲ್ಲಿ ನಾಲ್ಕು ವಿಕೆಟ್‌ಗಳನ್ನು ಕಳೆದುಕೊಂಡು ಗುರಿ ತಲುಪಿತು. ಕೋಲ್ಕತ್ತಾ ಪರ ಕಾರ್ತಿಕ್ ತ್ಯಾಗಿ ಮೂರು ವಿಕೆಟ್‌ಗಳನ್ನು ಪಡೆದರು. ಕೊಹ್ಲಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇದಕ್ಕೂ ಮೊದಲು, ಮಳೆ ಮತ್ತು ಪ್ರತಿಕೂಲ ಹವಾಮಾನದ ಕಾರಣ ಪಂದ್ಯ ಆರಂಭ ವಿಳಂಬವಾಯಿತು. ರಾಯಲ್ ಚಾಲೆಂಜರ್ಸ್ ಬೆಂಗಳೂರು ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಈ ಗೆಲುವಿನೊಂದಿಗೆ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ೧೬ ಅಂಕಗಳೊಂದಿಗೆ ಅಗ್ರಸ್ಥಾನಕ್ಕೆ ಏರಿತು ಹಾಗೂ ಗುಜರಾತ್ ಟೈಟಾನ್ಸ್‌ನೊಂದಿಗೆ ಸಮಬಲ ಸಾಧಿಸಿತು. ಆದರೆ ನಿವ್ವಳ ರನ್ ದರದಲ್ಲಿ ಆರ್.ಸಿ.ಬಿ ಅಗ್ರ ಶ್ರೇಯಾಂಕದಲ್ಲಿದೆ. ಧರ್ಮಶಾಲಾದ ಹಿಮಾಚಲ ಪ್ರದೇಶ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿಂದು ಪಂಜಾಬ್ ಕಿಂಗ್ಸ್ -

ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>